ಖಂಡಿತವಾಗಿಯೂ ನೀನು ಕಲ್ಲು ಎಂದು ನನಗೆ ತಿಳಿದಿದೆ. ನೀನು ತೊಂದರೆ ಕೊಡುವುದಿಲ್ಲ ಅಥವಾ ಪ್ರಯೋಜನವನ್ನು ನೀಡುವುದಿಲ್ಲ. ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ನಿನ್ನನ್ನು ಚುಂಬಿಸುವುದನ್ನು ನಾನು ನೋಡದಿರುತ್ತಿದ್ದರೆ ನಾನು ನಿನ್ನನ್ನು ಚುಂಬಿಸುತ್ತಿರಲಿಲ್ಲ

ಉಮರ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹಜರುಲ್-ಅಸ್ವದ್ (ಕಪ್ಪು
ಕಲ್ಲು) ಬಳಿಗೆ ಬಂದು ಅದನ್ನು ಚುಂಬಿಸಿದರು. ನಂತರ ಹೇಳಿದರು: "ಖಂಡಿತವಾಗಿಯೂ ನೀನು ಕಲ್ಲು
ಎಂದು ನನಗೆ ತಿಳಿದಿದೆ. ನೀನು ತೊಂದರೆ ಕೊಡುವುದಿಲ್ಲ ಅಥವಾ ಪ್ರಯೋಜನವನ್ನು ನೀಡುವುದಿಲ್ಲ. ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ)
ನಿನ್ನನ್ನು ಚುಂಬಿಸುವುದನ್ನು ನಾನು ನೋಡದಿರುತ್ತಿದ್ದರೆ ನಾನು ನಿನ್ನನ್ನು ಚುಂಬಿಸುತ್ತಿರಲಿಲ್ಲ."
[صحيح] [متفق عليه]

ಸತ್ಯವಿಶ್ವಾಸಿಗಳ ನಾಯಕ ಉಮರ್ ಬಿನ್ ಅಲ್-ಖತ್ತಾಬ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರವರು ಕಅಬಾದ ಮೂಲೆಯಲ್ಲಿರುವ ಹಜರುಲ್-ಅಸ್ವದ್ ಬಳಿಗೆ ಬಂದು ಅದನ್ನು ಚುಂಬಿಸಿದರು. ನಂತರ ಹೇಳಿದರು: "ಖಂಡಿತವಾಗಿಯೂ ನೀನು ಕಲ್ಲು ಎಂದು ನನಗೆ ತಿಳಿದಿದೆ. ನೀನು ತೊಂದರೆ ಕೊಡುವುದಿಲ್ಲ ಅಥವಾ ಪ್ರಯೋಜನವನ್ನು ನೀಡುವುದಿಲ್ಲ. ಪ್ರವಾದಿಯವರು (ಅವರ ಮೇಲೆ ಅಲ್ಲಾಹುವಿನ ಕೃಪೆ ಮತ್ತು ಶಾಂತಿಯಿರಲಿ) ನಿನ್ನನ್ನು ಚುಂಬಿಸುವುದನ್ನು ನಾನು ನೋಡದಿದ್ದರೆ ನಾನು ನಿನ್ನನ್ನು ಚುಂಬಿಸುತ್ತಿರಲಿಲ್ಲ."

http://www.sunnah.global/hadeeth/kn/show/3024